**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ ಸಿ ಸಂಃ 228/2020**

| | | |
|---|---|---|
| ಸಾಕ್ಷಿಯ ಹೆಸರುಃ | ಭಾಸ್ಕರ | ಪ್ರಾಸಾಃ 6 |
| ತಂದೆ ಹೆಸರುಃ | ಚಂದ್ರಶೇಖರ | ಚಾಸಾಃ 16 |
| ವಯಸ್ಸುಃ | 45 ವರ್ಷ | ಪ್ರಮಾಣೀಕರಿಸಿದ<br>ದಿಃ 23.02.2026 |
| ಉದ್ಯೋಗಃ | ಹೆಚ್.ಸಿ-44 ಬೈಲಕುಪ್ಪೆ ವೃತ್ತ ಕಚೇರಿ, ಪಿರಿಯಾಪಟ್ಟಣ | |
| ವಾಸ ಸ್ಥಳಃ | ಪಿರಿಯಾಪಟ್ಟಣ | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನಾನು 2017 ರಿಂದ 2022 ರವರೆಗೆ ಬೆಟ್ಟದಪುರ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

2. ದಿನಾಂಕಃ 09.09.2019 ರಂದು ನಾನು ಠಾಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಸಂಜೆ 4.00 ಗಂಟೆ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊ.ಸಂಃ 136/2019 ರಂತೆ ಕಲಂ 457, 380 ಐಪಿಸಿ ರಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

3. ದಿಃ 10.09.2019 ರಂದು ಕೃತ್ಯ ನಡೆದ ಸ್ಥಳಕ್ಕೆ ಅಂದರೆ ವಡ್ಡರ ಬೈಲುಕುಪ್ಪೆ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಬೇಟಿ ಕೊಟ್ಟು ಮ. 2.00 ರಿಂದ 3.00 ಗಂಟೆ ಸಮಯದಲ್ಲಿ ಪಂಚರಾದ ಚಾಸಾ-7 ಮತ್ತು 8 ರವರ ಸಮಕ್ಷಮ ಚಾಸಾ-1 ರವರು ತೋರಿಸಿಕೊಟ್ಟ ಜಾಗದಲ್ಲಿ ಮಹಜರು ಕ್ರಮ ಜರುಗಿಸಿ ಕಬ್ಬಿಣದ ಬೀಗವನ್ನು

ಅಮಾನತ್ತು ಪಡಿಸಿಕೊಂಡಿರುತ್ತೇನೆ. ನಂತರ ಅದರನ್ನು ಠಾಣಾ ಮಾಲುಪಟ್ಟಿ ಸಂ. 160/2019 ರಲ್ಲಿ ಅಳವಡಿಸಿಕೊಂಡಿರುತ್ತೇನೆ. ಚಾಸಾ-2 ರಿಂದ 4 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಸದರಿಯವರು ಪ್ರಥಮ ವರ್ತಮಾನ ವರದಿ ಗೆ ಅನುಗುಣವಾಗಿ ಸಾಕ್ಷಿ ನುಡಿದಿರುತ್ತಾರೆ. ಮುಂದಿನ ತನಿಖೆಯನ್ನು ಚಾಸಾ-17 ರವರಿಗೆ ವಹಿಸಿಕೊಟ್ಟಿರುತ್ತೇನೆ.

4. ಸಾಕ್ಷಿಯು ನಿಪಿ-1 ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.1(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ-3** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.3(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-2 ಮಹಜರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.2(ಡಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ಮಾಲುಪಟ್ಟಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ-4** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.4(ಎ)** ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದಿರುವ ಬೀಗವನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ಮು.ಮಾ-1 ಎಂದು ಗುರುತಿಸಲಾಗಿದೆ.

**<u>ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಹೆಚ್ ಕೆ ಎಸ್ ವಕೀಲರಿಂದಃ</u>**

5. ದೂರುದಾರರು ಆರೋಪಿತನ ಗುರುತಿನ ಬಗ್ಗೆ ಮತ್ತು ಯಾರೆಂದು ನಿಖರವಾಗಿ ತಿಳಿಸಿರಲಿಲ್ಲ. ಸ್ಥಳಕ್ಕೆ ಹೋದಾಗ ಪಂಚರಿಗೆ ನೋಟೀಸು ನೀಡಿಲ್ಲ. ಸ್ಥಳದಲ್ಲಿ ಪೋಟೋ ತೆಗೆದಿದ್ದೆ. ಮೇಲಾಧಿಕಾರಿಗಳಿಗೆ ನಾನು ತೆಗೆದ ಪೋಟೋವನ್ನು ನೀಡಿಲ್ಲ. ಬೀಗದ ಬಿಲ್ಲನ್ನು ಚಾಸಾ-1 ರವರಿಗೆ ಕೇಳಿ ಪಡೆದಿಲ್ಲ. ಮು.ಮಾ-1 ರ ರೀತಿಯ ಬೀಗಗಳು ಸಾಮಾನ್ಯವಾಗಿ ಸಿಗುತ್ತವೆ ಎಂದರೆ ಸರಿ. ಆ ದಿನ ಯಾವುದೇ ಕಳ್ಳತನ ಅಗಿರಲಿಲ್ಲ, ದೂರುದಾರರು ಸುಳ್ಳು ಪಿರ್ಯಾದಿ ಸಲ್ಲಿಸಿದ್ದಾರೆ ಎಂದರೆ ಸರಿಯಲ್ಲ.

ಠಾಣೆಯಲ್ಲೇ ಮಹಜರನ್ನು ಮತ್ತು ದೂರನ್ನು ಸೃಷ್ಟಿಸಿದ್ದೇವೆ ಎಂದರೆ ಸರಿಯಲ್ಲ. ಆ ದಿನ ಯಾವುದೇ ಬೀಗವನ್ನು ವಶಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಯಾವುದೇ ಹೇಳಿಕೆಯನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಅಮಾನತ್ತು ಪಡಿಸಿಕೊಂಡ ಮು.ಮಾ–1 ರ ಮೇಲೆ ಸಹಿ ಮಾಡಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿರುವ ಎಲ್ಲಾ ಅಂಶಗಳು ಸುಳ್ಳು ಎಂದರೆ ಸರಿಯಲ್ಲ. ಆರೋಪಿತರಿಗೆ ತೊಂದರೆ ನೀಡಲು ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**ತೆರದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**
**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**1 ನೇ ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**